ಡಾ|| ಹೆಚ್. ಸಿ. ಮಹದೇವಪ್ಪ : ಸ್ಯಾಂಕ್ಷನ್ಡ್ ಪೋಸ್ಟ್ ತುಂಬಿಕೊಳ್ಳುವುದಕ್ಕೆ ನಾವು ಕ್ರಮ ಕೈಗೊಳ್ಳುತ್ತೇವೆ.

ಉಪಾಧ್ಯಕ್ಷರು : ಈಗ ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು.

ಚುಕ್ಕೆ ಗುರ್ತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಎಂ.ಸಿ. ನಾಣಯ್ಯ (ಸಭಾನಾಯಕರು) : ಈ ದಿನದ ಲಿಖಿತ ಮೂಲಕ ಉತ್ತರಿಸುವ 11ನೇ ಪ್ರಶ್ನೆಗಳ ಪಟ್ಟಿಯಲ್ಲಿನ 35 ಪ್ರಶ್ನೆಗಳ ಪೈಕಿ 22 ಪ್ರಶ್ನೆಗಳ ಉತ್ತರಗಳನ್ನು ಸದನದ ಮುಂದೆ ಮಂಡಿಸುತ್ತೇನೆ.

ಹಾವೇರಿ ಜಿಲ್ಲೆಯಲ್ಲಿ ಗುತ್ತಿಗೆ ಆಧಾರದ ಮೇಲೆ ವೈದ್ಯರ ನೇಮಕಾತಿ

654 - ಶ್ರೀ ಯು.ಬಿ. ಬಣಕಾರ್ (ಹಿರೇಕೆರೂರು) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಾವೇರಿ ಜಿಲ್ಲೆಯಲ್ಲಿ ಖಾಲಿ ಇರುವ ವೈದ್ಯಾಧಿಕಾರಿಗಳ ಸಂಖ್ಯೆ ಎಷ್ಟು (ತಾಲ್ಲೂಕುವಾರು ಆಸ್ಪತ್ರೆವಾರು ವಿವರ ನೀಡುವುದು)

ಆ) ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡುವ ಪ್ರಕ್ರಿಯೆ ಪ್ರಾರಂಭವಾಗಿದೆಯೇ, ಹಾಗಿದ್ದಲ್ಲಿ ಈ ಪ್ರಕ್ರಿಯೆಯನ್ನು ಎಷ್ಟು ದಿನಗಳಲ್ಲಿ ಮುಗಿಸಲಾಗುವುದು?

ಡಾ|| ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ) :

ಅ) 22 (ತಾಲ್ಲೂಕುವಾರು ವಿವರ ಲಗತ್ತಿಸಿದೆ)

ಆ) ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡುವ ಪ್ರಕ್ರಿಯೆ ಮುಗಿದಿದ್ದು 20 ಮಂದಿ ವೈದ್ಯರನ್ನು ನೇಮಕ ಮಾಡಲಾಗಿದೆ.

ಹಾವೇರಿ ಜಿಲ್ಲೆಯಲ್ಲಿ ಖಾಲಿ ಇರುವ ವೈದ್ಯರುಗಳ ತಾಲ್ಲೂಕುವಾರು, ಆಸ್ಪತ್ರೆಗಳ ವಿವರ

1)	ಎ.ಡಿ.ಹೆಚ್.ಓ. ಹಾವೇರಿ	-	1
2)	ಎನ್ಎಲ್ಸಿಸಿ, ಹಾನಗಲ್	-	1
3)	ಪ್ರಾಥಮಿಕ ಆರೋಗ್ಯ ಕೇಂದ್ರ, ನರೇಗಲ್, ಹಾನಗಲ್ ತಾಲ್ಲೂಕು	-	1
4)	ಸಿಹೆಚ್ಸಿ, ಹಿರೇಕೆರೂರು, ಹಿರೇಕೆರೂರು ತಾಲ್ಲೂಕು	-	6
5)	ಪ್ರಾಥಮಿಕ ಆರೋಗ್ಯ ಕೇಂದ್ರ ಕುಡಪಲಿ, ಹಿರೇಕೆರೂರು ತಾಲ್ಲೂಕು	-	1

6)	ಸಾರ್ವಜನಿಕ ಆಸ್ಪತ್ರೆ, ರಾಣೆಬೆನ್ನೂರು, ರಾಣೆಬೆನ್ನೂರು ತಾಲ್ಲೂಕು	-	3
7)	ಸಿಹೆಚ್‌ಸಿ, ಬ್ಯಾಡಗಿ, ಬ್ಯಾಡಗಿ ತಾಲ್ಲೂಕು	-	2
8)	ಸಾರ್ವಜನಿಕ ಆಸ್ಪತ್ರೆ, ಸವಣೂರು, ಸವಣೂರು ತಾಲ್ಲೂಕು	-	1
9)	ಪ್ರಾಥಮಿಕ ಆರೋಗ್ಯ ಕೇಂದ್ರ, ಕಾರಡಗಿ, ಸವಣೂರು ತಾಲ್ಲೂಕು	-	1
10)	ಸಿಹೆಚ್‌ಸಿ, ಸಿಗ್ಗಾಂವಿ ತಾಲ್ಲೂಕು	-	5
	ಒಟ್ಟು	-	22

ರಾಮನಗರದ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿಯಿರುವ ಉಪನ್ಯಾಸಕರ ಹುದ್ದೆಗಳು

657- ಶ್ರೀ ಸಿ.ಎಂ. ಲಿಂಗಪ್ಪ (ರಾಮನಗರ) : ಮಾನ್ಯ ಪ್ರಾಥಮಿಕ, ಪ್ರೌಢ ಹಾಗೂ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿಯಿರುವ ಉಪನ್ಯಾಸಕರ ಸಂಖ್ಯೆ ಎಷ್ಟು?

ಆ) ರಾಮನಗರ ಪ್ರಥಮ ದರ್ಜೆ ಕಾಲೇಜಿನಲ್ಲಿ ವಿದ್ಯಾರ್ಥಿಗಳು ಉಪನ್ಯಾಸಕರ ನೇಮಕಾತಿಗೆ ಪ್ರತಿಭಟನೆ ಮೂಲಕ ಒತ್ತಾಯಪಡಿಸಿದರೂ ಸರ್ಕಾರದವರು ಕ್ರಮ ಕೈಗೊಳ್ಳದಿರಲು ಕಾರಣಗಳೇನು?

ಇ) ಖಾಲಿಯಿರುವ ಹುದ್ದೆಗಳನ್ನು ತುಂಬಲು ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) 417

ಆ) ರಾಮನಗರದ ಪ್ರಥಮ ದರ್ಜೆ ಕಾಲೇಜಿಗೆ ಮಂಜೂರಾದ ಒಟ್ಟು 17 ಹುದ್ದೆಗಳಲ್ಲಿ 15 ಹುದ್ದೆಗಳಿದುರು ಉಪನ್ಯಾಸಕರು ಕರ್ತವ್ಯ ನಿರ್ವಹಿಸುತ್ತಿದ್ದರು. ಕೊರತೆ ಇದ್ದ ಎರಡು ಖಾಲಿ ಹುದ್ದೆಗಳನ್ನು ತುಂಬಲು ಅಕ್ಕಪಕ್ಕದ ಕಾಲೇಜುಗಳಿಂದ ಉಪನ್ಯಾಸಕರನ್ನು ನಿಯೋಜಿಸಲು ಕ್ರಮ ಜರುಗಿಸಲಾಗಿದೆ.

ಇ) ಕಾಲೇಜುಗಳಲ್ಲಿ ಕಡಿಮೆ ಕಾರ್ಯಭಾರ ಇದ್ದ ಕಡೆ ಹೆಚ್ಚುವರಿ ಭೋದಕರನ್ನು ಒಂದು ಕಾಲೇಜಿನಿಂದ ಮತ್ತೊಂದು ಕಾಲೇಜಿಗೆ ನಿಯೋಜಿಸಲು ಹಾಗೂ ಕಾಲೇಜುಗಳಲ್ಲಿ ಉದ್ಭವಿಸುವ ಹೆಚ್ಚುವರಿ ಕಾರ್ಯಭಾರವನ್ನು ನಿರ್ವಹಿಸಲು ಅತಿಥಿ ಉಪನ್ಯಾಸಕರನ್ನು ಆಹ್ವಾನಿಸಲು ಉದ್ದೇಶಿಸಲಾಗಿದೆ. ಖಾಲಿ ಹುದ್ದೆಗಳನ್ನು ತುಂಬಲು ಕ್ರಮಕೈಗೊಳ್ಳಲಾಗುವುದು.